# ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಹುಣಸೂರು.

## ಸಿ.ಸಿ. ಸಂಖ್ಯೆ: 72/19

**ಸಾಕ್ಷಿಯನ್ನು ದಿಃ 26.09.2024 ರಂದು ಕರೆಸಿ ಪ್ರಮಾಣವಚನ ಭೋದಿಸಲಾಯಿತು.**

| | | | |
|---|---|---|---|
| ಹೆಸರು | ಸುರೇಶ | ಸಿಡಬ್ಲ್ಯೂ:13 | ಪಿಡಬ್ಲ್ಯೂ:10 |
| ತಂದೆಯ ಹೆಸರು | ಸಿದ್ದರಾಜೇ ಅರಸ್ | | |
| ವಯಸ್ಸು | 66 ವರ್ಷ | | |
| ಉದ್ಯೋಗ | ನಿವೃತ್ತ ಪಿ ಎಸ್ ಐ | | |
| ವಾಸಸ್ಥಳ | ಮೈಸೂರು | | |

**ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ**

ನಾನು ಜನವರಿ 2018 ರಿಂದ 30.04.2018 ರವರೆಗೆ ಹುಣಸೂರು ಪಟ್ಟಣ ಠಾಣೆಯಲ್ಲಿ ಪಿ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 24.04.2018 ರಂದು ಬೆಳಿಗ್ಗೆ 10.30 ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾ 1 ರವರು ನನ್ನ ಮುಂದೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಸ್ವೀಕರಿಸಿ ಅದರ ಆಧಾರದ ಮೇಲೆ ಠಾಣೆ ಮೊಕದ್ದಮೆ ಸಂಖ್ಯೆ 252/2018 ರಲ್ಲಿ ಪ್ರಕರಣ ದಾಖಲಿಸಿ ಪ್ರ ವ ವರದಿಯನ್ನು ನ್ಯಾಯಾಲಯಕ್ಕೆ ಹಾಗೂ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ನಾನು ಸ್ವೀಕರಿಸಿದ ದೂರನ್ನು ಈಗ ನೋಡುತ್ತಿದ್ದು ನಿಪಿ 8 ಎಂದು ಸಾಕ್ಷಿಯ ಸಹಿಯನ್ನು ನಿಪಿ 8(ಎ) ಎಂದು ಗುರುತಿಸಲಾಯಿತು. ನಾನು ಸಲ್ಲಿಸಿದ ಪ್ರ ವ ವರದಿಯನ್ನು ಈಗ ನೋಡುತ್ತಿದ್ದು ನಿಪಿ 9 ಎಂದು ಸಾಕ್ಷಿ ಸಹಿಯನ್ನು ನಿಪಿ 9(ಎ) ಎಂದು ಗುರುತಿಸಲಾಯಿತು. ಅದೇ ದಿನ ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಚಾಸಾ 1 ರವರು ಹಾಜರಿದ್ದು ಸ್ಥಳ ತೋರಿಸಿದ ಮೇರೆಗೆ ಪಂಚರಾದ ಚಾಸಾ 2 ಮತ್ತು 3 ರವರ ಸಮಕ್ಷಮ ಮಧ್ಯಾಹ್ನ 1 ರಿಂದ 1.45 ಗಂಟೆಯವರೆಗೆ ಮಹಜರನ್ನು ಜರುಗಿಸಿರುತ್ತೇನೆ. ಸದರಿ ಮಹಜರನ್ನು ನಿಪಿ 1 ಎಂದು ಗುರುತಿಸಿದ್ದು ಸಾಕ್ಷಿ

ತನ್ನ ಸಹಿಯನ್ನು ನಿಪಿ 1(ಸಿ) ಎಂದು ಗುರುತಿಸಲಾಯಿತು. ಮಹಜರು ಸಮಯದಲ್ಲಿ ಒಂದು ಬೀಗವನ್ನು ಅಮಾನತ್ತು ಪಡಿಸಿಕೊಂಡಿರುತ್ತೇನೆ ಅದನ್ನು ಮಾಲುಪಟ್ಟಿಯಲ್ಲಿ ನಮೂದಿಸಿ ನ್ಯಾಯಾಲಯದ ಆದೇಶಕ್ಕಾಗಿ ನಿವೇದಿಸಿಕೊಂಡಿರುತ್ತೇನೆ.

**( ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿದ್ದು ನೀಡಲಾಗಿದೆ.)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ.ಹೇ.ಕೇ.ಸ.ಇದೆ.,

(ಅನಿತ)
ಹೆಚ್ಚುವರಿ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆ.ಎಂ.ಎಫ್.ಸಿ.ಹುಣಸೂರು.